# ಉದಯವಾಣಿ

## Sunday 24th April 2022, Page No.05

**Presenting Honorary Doctorate Degree Tomorrow: RSST Hon. Sec.A.V.S. Murthy**

# ನಾಳೆ ಕೆಎಸ್‌ಒಯು ಘಟಿಕೋತ್ಸವ

## ಎಂಟು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

ಮೈಸೂರು: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 17ನೇ ವಾರ್ಷಿಕ ಘಟಿಕೋತ್ಸವ ಸೋಮವಾರ ಬೆಳಗ್ಗೆ 11.30 ಗಂಟೆಗೆ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ನಡೆಯಲಿದೆ. ಘಟಿಕೋತ್ಸವದಲ್ಲಿ ಒಟ್ಟು 8,338 ಅಭ್ಯರ್ಥಿಗಳು ಪದವಿ ಪಡೆಯಲಿದ್ದಾರೆ. ಇವರಲ್ಲಿ 3,272 ವಿದ್ಯಾರ್ಥಿಗಳು, 5,066 ವಿದ್ಯಾರ್ಥಿನಿಯರು ಇದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಮಾತನಾಡಿ, ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಘಟಿಕೋತ್ಸವದ ಅಧ್ಯಕ್ಷತೆ ವಹಿಸುವರು. ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ಘಟಿಕೋತ್ಸವದಲ್ಲಿ ಉಪಸ್ಥಿತರಿರುವರು. ರಾಜ್ಯ ಎಲೆಕ್ಟ್ರಾನಿಕ್ಸ್, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಇಲಾಖೆ ನಿರ್ದೇಶಕ (ತಾಂತ್ರಿಕ) ಎ.ಬಿ.ಬಸವರಾಜು ಘಟಿಕೋತ್ಸವ ಭಾಷಣ ಮಾಡುವರು ಎಂದರು.

ಘಟಿಕೋತ್ಸವದಲ್ಲಿ 31 ಸಂಶೋಧನಾ ವಿದ್ಯಾರ್ಥಿಗಳು ಪಿಎಚ್.ಡಿ, 48 ಅಭ್ಯರ್ಥಿಗಳು ಚಿನ್ನದ ಪದಕ, 38 ಅಭ್ಯರ್ಥಿಗಳು ನಗದು ಬಹುಮಾನ ಪಡೆಯಲಿದ್ದಾರೆ. ಮಾನವಿಕ ವಿಷಯಗಳಲ್ಲಿ 2855 ಪದವಿ ಹಾಗೂ ಸ್ನಾತಕೊತರ ಪದವೀಧರರು, ಸಮಾಜ ವಿಜ್ಞಾನ ವಿಷಯಗಳಲ್ಲಿ 2,776, ವಾಣಿಜ್ಯ ಶಾಸ್ತ್ರ ವಿಷಯಗಳಲ್ಲಿ 1,582 ಸ್ನಾತಕ ಹಾಗೂ ಸ್ನಾತಕೋತ್ತರ ಪದವೀಧರರು, ನಿರ್ವಹಣಾ ಶಾಸ್ತ್ರ ವಿಷಯದಲ್ಲಿ 152 ಸ್ನಾತಕೋತ್ತರ ಪದವೀಧರರು, ಶಿಕ್ಷಣ ಶಾಸ್ತ್ರ ವಿಷಯದಲ್ಲಿ 467 ಸ್ನಾತಕೋತ್ತರ ಪದವೀಧರರು, ವಿಜ್ಞಾನ ಹಾಗೂ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗದಲ್ಲಿ 506 ಸ್ನಾತಕ ಹಾಗೂ ಸ್ನಾತಕೋತ್ತರ ಪದವೀಧರರಿಗೆ ಪದವಿ ಪ್ರದಾನ ಮಾಡಲಾಗುವುದು.

ಪರೀಕ್ಷೆಗೆ ಒಟ್ಟು 10,744 ಅಭ್ಯರ್ಥಿಗಳು ಹಾಜರಾಗಿದ್ದರು. ಇವರಲ್ಲಿ 8,338 ಅಭ್ಯರ್ಥಿಗಳು ತೇರ್ಗಡೆಯಾಗಿದ್ದಾರೆ. ಶೇ.77.60 ಫಲಿತಾಂಶ ಬಂದಿದೆ ಎಂದು ಕುಲಪತಿ ಡಾ.ವಿದ್ಯಾಶಂಕರ್ ತಿಳಿಸಿದರು.



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಮೈಸೂರಿನಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

## ನಾಳೆ ಮೂವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ

ಮೈಸೂರು: ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಗೌರವ ಕಾರ್ಯದರ್ಶಿ ಎ.ವಿ.ಎಸ್.ಮೂರ್ತಿ, ಬೆಂಗಳೂರಿನ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ ಸಂಪನ್ಮೂಲ ನಿರ್ವಹಣಾ ಗುಂಪಿನ ಅಧ್ಯಕ್ಷ ಇ.ಎಸ್.ಚಕ್ರವರ್ತಿ, ವಿ.ಆರ್.ಎಲ್ ಸಮೂಹದ ವ್ಯವಸ್ಥಾಪಕ ನಿರ್ದೇಶಕ ಆನಂದ ಸಂಕೇಶ್ವರ್ ಅವರಿಗೆ ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಗೌರವ ಡಾಕ್ಟರೇಟ್ ಪದವಿಯನ್ನು ಪ್ರಕಟಿಸಿದೆ. ಮೈಸೂರಿನಲ್ಲಿ ಏ.25ರಂದು ನಡೆಯುವ ವಿಶ್ವವಿದ್ಯಾನಿಲಯದ 17ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಗುವುದು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಸಚಿವ ಡಾ.ಆರ್.ರಾಜಣ್ಣ, ಕುಲಸಚಿವ (ಮೌಲ್ಯಮಾಪನ) ಡಾ.ಕೆ.ಬಿ.ಪ್ರವೀಣ ಇತರರು ಉಪಸ್ಥಿತರಿದ್ದರು.